ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003

ಸಂಖ್ಯೆ: ಸಿ1.SSLC/ಪ.ಕೇಂ.ರ/25/2023–24 ದಿನಾಂಕ:07–03–2024

**ಜ್ಞಾಪನಾ**

ವಿಷಯ: 2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ಸಂಬಂಧಿಸಿದಂತೆ ವಿಡಿಯೋ ಕಾನ್ಫರೆನ್ಸ್‌ಗೆ ಹಾಜರಾಗುವ ಬಗ್ಗೆ.

ಉಲ್ಲೇಖ: ಮಂಡಲಿ ಸುತ್ತೋಲೆ ಸಂಖ್ಯೆ:ಸಿ1/ಎಸ್.ಎಸ್.ಎಲ್.ಸಿ/ಪ–1.ಸುತ್ತೋಲೆ–93/2023–24 ದಿ:04–03–2024

*****

2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–1ರ ಪರೀಕ್ಷಾ ಕೇಂದ್ರಗಳಿಗೆ ಕೊಠಡಿ ಮೇಲ್ವಿಚಾರಕರಾಗಿ ಪ್ರಾಥಮಿಕ ಶಾಲೆಯ ಶಿಕ್ಷಕರು/ಪ್ರಾಥಮಿಕ ಶಾಲೆಯ ಪದವೀಧರ ಶಿಕ್ಷಕರನ್ನು (ಜಿ.ಪಿ.ಟಿ) ನೇಮಕಾತಿ ಮಾಡಿಕೊಳ್ಳುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಈಗಾಗಲೇ ಪರೀಕ್ಷಾ ಕೇಂದ್ರಗಳಿಗೆ ಮುಖ್ಯ ಅಧೀಕ್ಷಕರನ್ನು ಜಿಲ್ಲಾ ಹಂತದಲ್ಲಿ ಗುರುತಿಸಿ ಪಟ್ಟಿಯನ್ನು ಮಂಡಲಿಗೆ ಸಲ್ಲಿಸಲಾಗಿರುತ್ತದೆ. ಸದರಿ ಮುಖ್ಯ ಅಧೀಕ್ಷಕರಲ್ಲಿ ಪ್ರತಿ ತಾಲ್ಲೂಕಿನಿಂದ ಇಬ್ಬರು ಅನುಭವಿ ಮತ್ತು ಕ್ರಿಯಾಶೀಲ ಮುಖ್ಯ ಅಧೀಕ್ಷಕರಿಗೆ ಮತ್ತು ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ ಮಂಡಲಿ ಹಂತದಲ್ಲಿ **ದಿನಾಂಕ:12–03–2024 ರಂದು ಅಪರಾಹ್ನ 3.00 ಗಂಟೆಯಿಂದ 5.00 ರವರೆಗೆ** ವಿಡಿಯೋ ಕಾನ್ಫರೆನ್ಸ್ ಮೂಲಕ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಸದರಿ ವಿಡಿಯೋ ಕಾನ್ಫರೆನ್ಸ್‌ನಲ್ಲಿ ತರಬೇತಿ ಪಡೆದ ಮುಖ್ಯ ಅಧೀಕ್ಷಕರು ಮತ್ತು ತಾಲ್ಲೂಕು ನೋಡಲ್ ಅಧಿಕಾರಿಗಳು ಆಯಾ ತಾಲ್ಲೂಕಿನ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ನೇಮಕಗೊಳ್ಳುವ ಕೊಠಡಿ ಮೇಲ್ವಿಚಾರಕರು ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ಆಯಾ ತಾಲ್ಲೂಕು ಹಂತದಲ್ಲಿ ತರಬೇತಿ ನೀಡಬೇಕಿರುತ್ತದೆ.

ಆದ್ದರಿಂದ ಪ್ರತಿ ತಾಲ್ಲೂಕಿನಿಂದ ಇಬ್ಬರು ಮುಖ್ಯ ಅಧೀಕ್ಷಕರು ಮತ್ತು ತಾಲ್ಲೂಕು ನೋಡಲ್ ಅಧಿಕಾರಿಗಳನ್ನು ತರಬೇತಿಗೆ ನಿಯೋಜಿಸಲು ಅಗತ್ಯ ಕ್ರಮಕೈಗೊಳ್ಳುವುದು ಹಾಗೂ ಸದರಿ ವಿಡಿಯೋ ಕಾನ್ಫರೆನ್ಸ್‌ಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಿಲ್ಲಾ ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಗಳು ಉಪಸ್ಥಿತರಿರುವಂತೆ ತಿಳಿಸಿದೆ.

ಮೇಲೆ ತಿಳಿಸಿದ ಎಲ್ಲಾ ಅಧಿಕಾರಿಗಳು, ಪ್ರತಿ ತಾಲ್ಲೂಕಿನಿಂದ ಇಬ್ಬರು ಮುಖ್ಯ ಅಧೀಕ್ಷಕರು ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳು ಕಡ್ಡಾಯವಾಗಿ ಆಯಾ ಜಿಲ್ಲಾ ಡಯಟ್ ಸ್ವೀಕೃತಿ ಕೇಂದ್ರಗಳಲ್ಲಿ ಮಾತ್ರ ವಿಡಿಯೋ ಕಾನ್ಫರೆನ್ಸ್‌ಗೆ ಹಾಜರಾಗುವಂತೆ ಸೂಚಿಸಿದೆ.

**ವಿಶೇಷ ಸೂಚನೆ:–ವಿಡಿಯೋ ಕಾನ್ಫರೆನ್ಸ್‌ಗೆ ಸಂಪರ್ಕ ಸಾಧಿಸಲು 300300 ಸಂಖ್ಯೆಗೆ ಕರೆ ಮಾಡುವುದು.**

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು(ಪರೀಕ್ಷೆ)

ಪ್ರತಿಯನ್ನು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಅಭಿವೃದ್ಧಿ), ಶಾಲಾ ಶಿಕ್ಷಣ ಇಲಾಖೆ, ರವರಿಗೆ ಕಳುಹಿಸುತ್ತಾ, ವಿಡಿಯೋ ಸಂವಾದಕ್ಕೆ ಡಯಟ್ ಸ್ವೀಕೃತಿ ಕೇಂದ್ರದಲ್ಲಿ ಅಗತ್ಯ ವ್ಯವಸ್ಥೆ ಮಾಡಲು ತಿಳಿಸಿದೆ.
3. ರಾಜ್ಯದ ಎಲ್ಲಾ ಜಿಲ್ಲಾ ಎಸ್.ಎಸ್.ಎಲ್.ಸಿ. ನೋಡಲ್ ಅಧಿಕಾರಿಗಳಿಗೆ.
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
5. ರಾಜ್ಯದ ಎಲ್ಲಾ ತಾಲ್ಲೂಕು ಎಸ್.ಎಸ್.ಎಲ್.ಸಿ. ನೋಡಲ್ ಅಧಿಕಾರಿಗಳಿಗೆ.
6. ಹಿರಿಯ ಸಹಾಯಕ ನಿರ್ದೇಶಕರು, ಗಣಕ ಶಾಖೆ ರವರಿಗೆ.
7. ಕಛೇರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ರವರು ಮಾನ್ಯ ಅಧ್ಯಕ್ಷರು ರವರ ಅವಗಾಹನೆಗೆ ತರಲು ಕೋರಿದೆ.

E:\2023-24 Exam\C1 LETTERS.docx

Kiran Raghupathi